ಕರ್ನಾಟಕ ಸರ್ಕಾರ
ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿ
C/o, ನಿರ್ದೇಶನಾಲಯ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಒಂದನೇ ಮಹಡಿ, ಬಹು ಮಹಡಿಗಳ ಕಟ್ಟಡ, ಡಾ॥ ಬಿ.ಆರ್. ಅಂಬೇಡ್ಕರ್ ವೀದಿ, ಬೆಂಗಳೂರು-560001, ಕರ್ನಾಟಕ
E-mail ID: icps.kar@gmail.com
Ph.No.080-22879381/82

ಸಂ:ಕೆಎಸ್‌ಐಸಿಪಿಎಸ್/ಸಿಎನ್‌ಸಿಪಿ/ಸುತ್ತೋಲೆ/04:2016-17

ದಿನಾಂಕ:21.08.2020

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು,
ಜಿಲ್ಲಾ ಮಕ್ಕಳ ರಕ್ಷಣಾ ಘಟಕ,
ಎಲ್ಲಾ ಜಿಲ್ಲೆಗಳು.

ಮಾನ್ಯರೇ,

ವಿಷಯ: ಮಕ್ಕಳ ಸಾಗಾಣಿಕೆದಾರರ ಮೇಲೆ ಪೊಲೀಸ್ ಠಾಣೆಯಲ್ಲಿ ಪ್ರಥಮ ವರ್ತಮಾನ ವರದಿ (ಎಫ್‌ಐಆರ್) ದಾಖಲಿಸುವ ಬಗ್ಗೆ.

ಉಲ್ಲೇಖ: ಈ ಕಛೇರಿ ಪತ್ರ ಸಂ:ಕೆಎಸ್‌ಐಸಿಪಿಎಸ್/ಸಿಎನ್‌ಸಿಪಿ/ಸುತ್ತೋಲೆ/04:2016-17 ದಿನಾಂಕ:02.07.2020

*******

ಅಕ್ರಮ ಸಾಗಾಣಿಕೆಗೆ ಸಿಲುಕಿದ ಮಕ್ಕಳ ರಕ್ಷಣೆ ಕಾರ್ಯಾಚರಣೆ ಸಂದರ್ಭದಲ್ಲಿ ಮೊದಲನೆಯ ಸಂಪರ್ಕದಲ್ಲಿರುವ ಸ್ವಯಂ ಸೇವಾ ಸಂಸ್ಥೆಗಳಲ್ಲಿ ಮಕ್ಕಳ ರಕ್ಷಣಾ ಕಾರ್ಯಾಚರಣೆ ನಡೆದ 24 ಗಂಟೆಗಳೊಳಗಾಗಿ ಅಕ್ರಮ ಸಾಗಾಣಿಕೆದಾರರ ವಿರುದ್ಧ FIR (ಪ್ರಥಮ ವರ್ತಮಾನ ವರದಿ) ದಾಖಲಿಸಲು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ICPS ಘಟಕದ ಸಾಮಾನ್ಯ ಪ್ರಯಾಣ ವೆಚ್ಚ, ಸಾದಿಲ್ವಾರು ವೆಚ್ಚದಡಿ (Non Luxury Travel Cost) ವೆಚ್ಚ ಭರಿಸಲು ಉಲ್ಲೇಖಿತ ಸುತ್ತೋಲೆಯಲ್ಲಿ ಅವಕಾಶ ಕಲ್ಪಿಸಲಾಗಿದೆ.

ಪ್ರಕರಣದ FIR ದಾಖಲು ಸಂದರ್ಭದಿಂದ ಹಿಡಿದು ನ್ಯಾಯಾಲಯದ ತೀರ್ಮಾನವಾಗುವವರೆಗೆ ಸ್ವಯಂ ಸೇವಾ ಸಂಸ್ಥೆಗಳು ಭರಿಸುವ ವೆಚ್ಚವನ್ನು ಸ್ವಯಂ ಸೇವಾ ಸಂಸ್ಥೆ (NGO)ಗಳಿಗೆ ಪಾವತಿಸಲು ಅವಕಾಶ ಕಲ್ಪಿಸಿರುವ ಬಗ್ಗೆ ಸಂಬಂಧಪಟ್ಟ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಸ್ವಯಂ ಸೇವಾ ಸಂಸ್ಥೆಗಳ ಗಮನಕ್ಕೆ ತಂದು ಮಕ್ಕಳ ಸಾಗಾಣಿಕಾ ಪ್ರಕರಣಗಳಲ್ಲಿ FIR ದಾಖಲಿಸುವಂತೆ ಪ್ರೋತ್ಸಾಹಿಸಲು ಕ್ರಮವಹಿಸುವಂತೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ವತಿಯಿಂದಲೂ FIR ದಾಖಲಿಸಲು ಕ್ರಮ ಕೈಗೊಳ್ಳಲು ಸೂಚಿಸಿದೆ. ಈ ಕುರಿತು ಕೈಗೊಂಡ ಕ್ರಮದ ಬಗ್ಗೆ ಪ್ರತೀ 15 ದಿನಗಳಿಗೊಮ್ಮೆ ಅನುಪಾಲನಾ ವರದಿ ಸಲ್ಲಿಸಲು ಸೂಚಿಸಿದೆ.

21.08.2020
ನಿರ್ದೇಶಕರು
ಸಮಗ್ರ ಮಕ್ಕಳ ರಕ್ಷಣಾ ಯೋಜನೆ
ಬೆಂಗಳೂರು.

ಪ್ರತಿಗಳು:

1. ಅಧ್ಯಕ್ಷರು, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಎಲ್ಲಾ ಜಿಲ್ಲೆಗಳ ಮಾಹಿತಿಗಾಗಿ

ಪು.ತಿ.ನೋ.....

E/Circular and letter